All India Radio: Bangalore
National Bulletin In Kannada
09.09.2025  07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
<><><><>

ಮುಖ್ಯಾಂಶಗಳು

೧. ಉಪರಾಷ್ಟ್ರಪತಿ ಸ್ಥಾನಕ್ಕೆ ಇಂದು ಚುನಾವಣೆ; ಎನ್‌ಡಿಎ ಹಾಗೂ ಐಎನ್‌ಡಿಐ ಮೈತ್ರಿಕೂಟದ ಅಭ್ಯರ್ಥಿಗಳು ಕಣದಲ್ಲಿ

೨. ಪ್ರವಾಹ ಪೀಡಿತ ಹಿಮಾಚಲ ಪ್ರದೇಶ ಮತ್ತು ಪಂಜಾಬ್‌ಗೆ ಇಂದು ಪ್ರಧಾನಿ ನರೇಂದ್ರ ಮೋದಿ ಭೇಟಿ

೩. ಮಾರಿಷಸ್ ಪ್ರಧಾನಿ ಡಾ. ನವೀನ್‌ಚಂದ್ರ ರಾಮಗೂಲಂ ಇಂದಿನಿಂದ ೮ ದಿನಗಳ ಭಾರತ ಪ್ರವಾಸ

೪. ಮತದಾರರ ಪಟ್ಟಿ ಸೇರ್ಪಡೆಗೆ ಆಧಾರ್ ಕಾರ್ಡನ್ನು ೧೨ನೇ ಗುರುತಿನ ದಾಖಲೆಯಾಗಿ ಪರಿಗಣಿಸುವಂತೆ ಸುಪ್ರೀಂ ಕೋರ್ಟ್ ಆದೇಶ

೫. ನೇಪಾಳದಲ್ಲಿ ಸಾಮಾಜಿಕ ಜಾಲತಾಣ ನಿರ್ಬಂಧಕ್ಕೆ ತೀವ್ರ ಪ್ರತಿಭಟನೆ: ೧೯ ಮಂದಿ ಸಾವು, ೩೪೦ಕ್ಕೂ ಹೆಚ್ಚು ಮಂದಿಗೆ ಗಾಯ

<><><><>

ಉಪರಾಷ್ಟ್ರಪತಿ ಸ್ಥಾನಕ್ಕೆ ಇಂದು ಚುನಾವಣೆ ನಡೆಯಲಿದೆ. ಎನ್‌ಡಿಎ ಅಭ್ಯರ್ಥಿಯಾಗಿ ಮಹಾರಾಷ್ಟ್ರ ರಾಜ್ಯಪಾಲರಾದ ಸಿ.ಪಿ. ರಾಧಾಕೃಷ್ಣನ್ ಹಾಗೂ ಐಎನ್‌ಡಿಐ ಮೈತ್ರಿಕೂಟದ ಅಭ್ಯರ್ಥಿಯಾಗಿ ಸುಪ್ರೀಂ ಕೋರ್ಟ್‌ನ ಮಾಜಿ ನ್ಯಾಯಾಮೂರ್ತಿ ಬಿ. ಸುದರ್ಶನ ರೆಡ್ಡಿ ಕಣದಲ್ಲಿದ್ದಾರೆ. ಉಪರಾಷ್ಟ್ರಪತಿಯನ್ನು ಎರಡು ಸದನಗಳ ಸದಸ್ಯರ ಮೂಲಕ ಆಯ್ಕೆ ಮಾಡಲಾಗುತ್ತದೆ. ಮತದಾರರು ತಮ್ಮ ವೈಯಕ್ತಿಕ ಆಯ್ಕೆಯ ಮೇರೆಗೆ ಮತಹಾಕಬಹುದು ಮತ್ತು

ಯಾವುದೇ ಪಕ್ಷದ ವಿಪ್‌ಗೆ ಒಳಪಡುವ ಅಗತ್ಯವಿಲ್ಲ. ಉಪರಾಷ್ಟ್ರಪತಿ ಚುನಾವಣೆಯಲ್ಲಿ ಪ್ರತಿ ಮತಕ್ಕೂ ಸಮಾನ ಮೌಲ್ಯವಿದೆ. ಪ್ರಸ್ತುತ ಲೋಕಸಭೆಯಲ್ಲಿ ೫೪೨ ಮತ್ತು ರಾಜ್ಯಸಭೆಯಲ್ಲಿ ೨೩೯ ಸದಸ್ಯರಿದ್ದಾರೆ. ಒಟ್ಟು ಮತದಾರರ ಸಂಖ್ಯೆ ೭೮೧ ಆಗಿದ್ದು, ೩೯೧ ಬಹುಮತದ ಸಂಖ್ಯೆಯಾಗಿದೆ. ಇಂದು ಬೆಳಿಗ್ಗೆ ೧೦ ಗಂಟೆಯಿಂದ ಸಂಜೆ ೫ ಗಂಟೆವರೆಗೆ ಮತದಾನ ನಡೆಯಲಿದೆ. ಮತ ಎಣಿಕೆ ಸಂಜೆ ೬ ಗಂಟೆಯ ನಂತರ ಆರಂಭವಾಗಲಿದೆ. ಈ ಬಾರಿ ಮೊದಲ ಬಾರಿಗೆ ಉಪರಾಷ್ಟ್ರಪತಿ ಚುನಾವಣೆ ಹೊಸ ಸಂಸತ್ ಭವನದಲ್ಲಿ ನಡೆಯುತ್ತಿದೆ. ಜುಲೈ ತಿಂಗಳಲ್ಲಿ ಮಾಜಿ ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ರಾಜೀನಾಮೆ ನೀಡಿದ ಹಿನ್ನೆಲೆಯಲ್ಲಿ ಚುನಾವಣೆ ನಡೆಸುತ್ತಿದೆ.

<><><><>

ಪ್ರಧಾನಿ ನರೇಂದ್ರ ಮೋದಿ ಅವರಿಂದು ಹಿಮಾಚಲ ಪ್ರದೇಶ ಮತ್ತು ಪಂಜಾಬ್‌ಗೆ ಭೇಟಿ ನೀಡಲಿದ್ದು, ಪ್ರವಾಹ ಪರಿಸ್ಥಿತಿಯನ್ನು ಪರಿಶೀಲಿಸಿ, ಪರಿಹಾರ ಮತ್ತು ಪುನರ್ವಸತಿ ಕಾರ್ಯಗಳ ಪರಿಶೀಲನೆ ನಡೆಸಲಿದ್ದಾರೆ.ಪ್ರಧಾನಮಂತ್ರಿ ಇಂದು ಮಧ್ಯಾಹ್ನ ಹಿಮಾಚಲ ಪ್ರದೇಶದ ಕಾಂಗ್ರಾ ಜಿಲ್ಲೆಯ ಧರ್ಮಶಾಲೆಗೆ ತೆರಳಲಿದ್ದಾರೆ. ಧರ್ಮಶಾಲಾದಲ್ಲಿ ಅವರು ರಾಜ್ಯ ಸರ್ಕಾರದ ಅಧಿಕಾರಿಗಳೊಂದಿಗೆ ಉನ್ನತ ಮಟ್ಟದ ಸಮೀಕ್ಷಾ ಸಭೆ ನಡೆಸಲಿದ್ದು, ವಿಪತ್ತಿನಿಂದ ಬಳಲುತ್ತಿರುವ ಸ್ಥಳೀಯ ನಿವಾಸಿಗಳೊಂದಿಗೆ ಸಂವಾದ ನಡೆಸಲಿದ್ದಾರೆ. ಅಲ್ಲದೆ, ರಾಷ್ಟ್ರೀಯ ವಿಪತ್ತು ಪ್ರತಿಕ್ರಿಯಾ ಪಡೆ, ರಾಜ್ಯ ವಿಪತ್ತು ಪ್ರತಿಕ್ರಿಯಾ ಪಡೆ ಮತ್ತು ಆಪದಾ ಮಿತ್ರ ತಂಡದ ಸಿಬ್ಬಂದಿಯನ್ನು ಭೇಟಿಯಾಗಲಿದ್ದಾರೆ. ಇದರ ಜೊತೆಗೆ ಪ್ರಧಾನಿ, ಹಿಮಾಚಲ ಪ್ರದೇಶದ ಪ್ರವಾಹ ಹಾಗೂ ಭೂಕುಸಿತ ಪೀಡಿತ ಪ್ರದೇಶಗಳ ವೈಮಾನಿಕ ಸಮೀಕ್ಷೆ ನಡೆಸಲಿದ್ದಾರೆ. ಹಿಮಾಚಲ ಪ್ರದೇಶದ ಪ್ರವಾಸದ ನಂತರ, ಪ್ರಧಾನಿ, ಪಂಜಾಬ್‌ನ ಪ್ರವಾಹಪೀಡಿತ ಪ್ರದೇಶಗಳ ವೈಮಾನಿಕ ಸಮೀಕ್ಷೆ ನಡೆಸಲಿದ್ದಾರೆ. ಅವರು ಸಂಜೆ ಗುರ್ದಾಸ್‌ಪುರ್‌ಗೆ ತೆರಳಿ, ಹಿರಿಯ ಅಧಿಕಾರಿಗಳೊಂದಿಗೆ, ಪರಿಸ್ಥಿತಿಯ ಬಗ್ಗೆ ಪರಿಶೀಲನಾ ಸಭೆ ನಡೆಸಲಿದ್ದಾರೆ. ಗುರ್ದಾಸ್‌ಪುರ್‌ನಲ್ಲಿ ಪ್ರವಾಹ ಸಂತ್ರಸ್ತರ ಹಾಗೂ ಎನ್‌ಡಿಆರ್‌ಎಫ್, ಎಸ್‌ಡಿಆರ್‌ಎಫ್ ಮತ್ತು ಆಪದಾ ಮಿತ್ರ ತಂಡದ ಸದಸ್ಯರೊಂದಿಗೆ ಸಂವಾದ ನಡೆಸಲಿದ್ದಾರೆ.

<><><><>

ಮಾರಿಷಸ್ ಪ್ರಧಾನಿ ಡಾ. ನವೀನ್ ಚಂದ್ರ ರಾಮಗೂಲಂ ಮತ್ತು ಅವರ ಪತ್ನಿ ವೀಣಾ ರಾಮಗೂಲಂ ಇಂದಿನಿಂದ ಎಂಟು ದಿನಗಳಿಗಾಗಿ ಭಾರತ ಭೇಟಿ ಕೈಗೊಳ್ಳಲ್ಲಿದ್ದಾರೆ. ಪ್ರಧಾನಿ

ರಾಮಗೂಲಂ ಅವರ ಪ್ರಸ್ತುತ ಅವಧಿಯಲ್ಲಿ ಭಾರತಕ್ಕೆ ನೀಡುತ್ತಿರುವ ಮೊದಲ ದ್ವಿಪಕ್ಷೀಯ ಭೇಟಿ ಇದಾಗಿದೆ. ಅವರು ಈ ಹಿಂದೆ ೨೦೧೪ ರ ಮೇ ತಿಂಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಪ್ರಮಾಣವಚನ ಸ್ವೀಕಾರ ಸಮಾರಂಭದಲ್ಲಿ ಭಾಗವಹಿಸಲು ಭಾರತಕ್ಕೆ ಭೇಟಿ ನೀಡಿದ್ದರು. ಭಾರತ ಭೇಟಿಯ ಸಮಯದಲ್ಲಿ, ಪ್ರಧಾನಿ ರಾಮಗೂಲಂ, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಲಿದ್ದು, ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಹೆಚ್ಚಿಸುವ ಕುರಿತು ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ಚರ್ಚೆ ನಡೆಸಲಿದ್ದಾರೆ. ಪ್ರವಾಸದ ಭಾಗವಾಗಿ ಡಾ. ರಾಮಗೂಲಂ ಮುಂಬೈ, ವಾರಣಾಸಿ, ಅಯೋಧ್ಯೆ ಮತ್ತು ತಿರುಪತಿಗೂ ಭೇಟಿ ನೀಡಲಿದ್ದಾರೆ.

<><><>

ಬಿಹಾರದಲ್ಲಿ ಪರಿಷ್ಕೃತ ಮತದಾರರ ಪಟ್ಟಿಗೆ ಹೆಸರು ಸೇರಿಸಲು ಗುರುತಿನ ದಾಖಲೆ ರೂಪದಲ್ಲಿ ಆಧಾರ್ ಕಾರ್ಡ್ ಅನ್ನು ೧೨ನೇ ದಾಖಲೆಯಾಗಿ ಪರಿಗಣಿಸಬೇಕು ಎಂದು ಸುಪ್ರೀಂ ಕೋರ್ಟ್ ಚುನಾವಣಾ ಆಯೋಗಕ್ಕೆ ನಿರ್ದೇಶನ ನೀಡಿದೆ.  ಈ ಹಿನ್ನೆಲೆಯಲ್ಲಿ, ಆಧಾರ್ ಕಾರ್ಡ್ ಅನ್ನು ಸ್ವತಂತ್ರ ಗುರುತಿನ ದಾಖಲೆಯಾಗಿ ಬಳಸಿಕೊಂಡು ಮತದಾರರ ಪಟ್ಟಿಗೆ ಸೇರಿಸಬಹುದು. ಆದರೆ, ಆಧಾರ್ ಕಾರ್ಡ್ ಅನ್ನು ಪೌರತ್ವದ ಗುರುತಾಗಿ ಪರಿಗಣಿಸಲಾಗುವುದಿಲ್ಲ ಎಂದು ನ್ಯಾಯಾಲಯ ತನ್ನ ಆದೇಶದಲ್ಲಿ ಸ್ಪಷ್ಟಪಡಿಸಿದೆ.

<><><>

ನೇಪಾಳದಲ್ಲಿ ಸಾಮಾಜಿಕ ಜಾಲತಾಣಗಳ ನಿಷೇಧದ ವಿರುದ್ಧ ಯುವಕರ ನೇತೃತ್ವದಲ್ಲಿ ನಡೆದ ಪ್ರತಿಭಟನೆ ಗಲಭೆಯ ರೂಪ ಪಡೆದುಕೊಂಡಿದ್ದು, ಕನಿಷ್ಠ ೧೯ ಮಂದಿ ಪ್ರಾಣ ಕಳೆದುಕೊಂಡಿದ್ದಾರೆ ಹಾಗೂ ೩೪೦ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ. ಸೆಪ್ಟೆಂಬರ್ ೪ ರಿಂದ ಜಾರಿಗೆ ಬಂದಿರುವ ಈ ನಿಷೇಧವು ನೋಂದಾಯಿತವಲ್ಲದ ಫೇಸ್‌ಬುಕ್, ಇನ್‌ಸ್ಟಾಗ್ರಾಂ, ಎಕ್ಸ್ ಮತ್ತು ಯೂಟ್ಯೂಬ್ ವೇದಿಕೆಗಳನ್ನು ತಡೆಹಿಡಿಯುತ್ತದೆ. ಕಠ್ಮಂಡುನಲ್ಲಿ ಸಂಸತ್ತಿಗೆ ನುಗ್ಗಿದ ಪ್ರತಿಭಟನಾಕಾರರ ಮೇಲೆ ಪೊಲೀಸರು ಗುಂಡು ಹಾರಿಸಿದ ಬಳಿಕ ಗಲಭೆ ಮತ್ತಷ್ಟು ತೀವ್ರಗೊಂಡಿದೆ. ದೇಶಾದ್ಯಂತ ಯುವಕರು ಪ್ರತಿಭಟನೆಗಳನ್ನು ನಡೆಸುತ್ತಿದ್ದಾರೆ. ಪರಿಸ್ಥಿತಿ ನಿಯಂತ್ರಣಕ್ಕೆ ಸರ್ಕಾರ ತನಿಖಾ ಸಮಿತಿಯನ್ನು ರಚಿಸಿದ್ದು, ಹಲವು ಪ್ರದೇಶಗಳಲ್ಲಿ ಕರ್ಫ್ಯೂ ವಿಧಿಸಿದೆ.

<><><>

ಜೆರುಸಲೆಮ್‌ನಲ್ಲಿ ನಾಗರಿಕರ ಮೇಲೆ ನಡೆದ ಭೀಕರ ಭಯೋತ್ಪಾದಕ ದಾಳಿಯನ್ನು ಪ್ರಧಾನಿ ನರೇಂದ್ರ ಮೋದಿ ತೀವ್ರವಾಗಿ ಖಂಡಿಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಪ್ರಧಾನಿ, ಭಾರತ ಎಲ್ಲಾ ರೀತಿಯ ಭಯೋತ್ಪಾದನೆ ಮತ್ತು ಅದರ ಅಭಿವ್ಯಕ್ತಿಗಳನ್ನು ಖಂಡಿಸುತ್ತದೆ ಹಾಗೂ ಭಯೋತ್ಪಾದನೆಯ ಬಗ್ಗೆ ಶೂನ್ಯ ಸಹಿಷ್ಣುತೆಯ ನೀತಿಯ ದೃಢ ನಿಲುವು ಹೊಂದಿದೆ ಎಂದು ಹೇಳಿದ್ದಾರೆ. ಭಯೋತ್ಪಾದಕ ದಾಳಿಗೆ ಒಳಗಾದ ಸಂತ್ರಸ್ತ ಕುಟುಂಬಗಳಿಗೆ ಪ್ರಧಾನಿ ಸಂತಾಪ ಸೂಚಿಸಿದ್ದಾರೆ. ಮತ್ತು ಗಾಯಗೊಂಡವರು ಶೀಘ್ರವಾಗಿ ಚೇತರಿಸಿಕೊಳ್ಳಲಿ ಎಂದು ಹಾರೈಸಿದ್ದಾರೆ.

<><><><>

ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ನವದೆಹಲಿಯಲ್ಲಿ ಇಸ್ರೇಲ್ ಹಣಕಾಸು ಸಚಿವ ಬೆಜಲೆಲ್ ಸ್ಮೋಟ್ರಿಚ್ ಅವರನ್ನು ಭೇಟಿಯಾದರು. ಸಾಮಾಜಿಕ ಮಾಧ್ಯಮದಲ್ಲಿ ಸಚಿವ ಗೋಯಲ್, ಎರಡು ರಾಷ್ಟ್ರಗಳ ನಡುವಿನ ವ್ಯಾಪಾರ ಮತ್ತು ಹೂಡಿಕೆ ಸಂಬಂಧಗಳನ್ನು ಮತ್ತಷ್ಟು ಬಲಪಡಿಸುವ ಮತ್ತು ಪರಸ್ಪರ ಬೆಳವಣಿಗೆಗೆ ಹೊಸ ಮಾರ್ಗಗಳನ್ನು ಅನ್ವೇಷಿಸುವ ಬಗ್ಗೆ ಚರ್ಚೆ ಕೇಂದ್ರೀಕರಿಸಿದೆ ಎಂದು ಹೇಳಿದ್ದಾರೆ.

<><><><>

ಭಾರತ ಮತ್ತು ನ್ಯೂಜಿಲ್ಯಾಂಡ್ ನಡುವಿನ ವಿದೇಶಾಂಗ ಕಾರ್ಯಾಲಯ ಸಮಾಲೋಚನೆಗಳ ೬ನೇ ಸುತ್ತಿನ ಸಭೆ ನವದೆಹಲಿಯಲ್ಲಿ ನಿನ್ನೆ ನಡೆಯಿತು. ಈ ಸಭೆಯಲ್ಲಿ, ಉಭಯ ರಾಷ್ಟ್ರಗಳ ನಿಯೋಗಗಳು ರಕ್ಷಣಾ ಹಾಗೂ ಭದ್ರತಾ ಸಹಕಾರ, ವ್ಯಾಪಾರ ಮತ್ತು ಹೂಡಿಕೆ, ಶಿಕ್ಷಣ, ಕೃಷಿ, ವೈದ್ಯಕೀಯ, ಹವಾಮಾನ ಬದಲಾವಣೆ, ಕ್ರೀಡೆ ಮತ್ತು ಜನರಿಂದ ಜನರ ಸಂಬಂಧಗಳು ಸೇರಿದಂತೆ ವಿವಿಧ ವಲಯಗಳಲ್ಲಿ ದ್ವಿಪಕ್ಷೀಯ ಸಂಬಂಧದ ಕುರಿತು ವಿಮರ್ಶೆ ನಡೆಸಿದವು. ಭಾರತೀಯ ನಿಯೋಗವನ್ನು ವಿದೇಶಾಂಗ ವ್ಯವಹಾರಗಳ ಸಚಿವಾಲಯದ ದಕ್ಷಿಣ ವಿಭಾಗದ ಕಾರ್ಯದರ್ಶಿ ಡಾ. ನೀನಾ ಮಲ್ಹೋತ್ರಾ ನೇತೃತ್ವ ವಹಿಸಿದರೆ, ನ್ಯೂಜಿಲೆಂಡ್ ನಿಯೋಗ, ನ್ಯೂಜಿಲ್ಯಾಂಡ್ ವಿದೇಶಾಂಗ ಮತ್ತು ವ್ಯಾಪಾರ ಸಚಿವಾಲಯದ ಉಪ ಕಾರ್ಯದರ್ಶಿ ಗ್ರಾಹೇಮ್ ಮೋರ್ಟನ್ ನೇತೃತ್ವದಲ್ಲಿ ಸಭೆಯಲ್ಲಿ ಭಾಗವಹಿಸಿತು. ಈ ವರ್ಷ ಮಾರ್ಚ್‌ನಲ್ಲಿ ನ್ಯೂಜಿಲ್ಯಾಂಡ್ ಪ್ರಧಾನಿ ಕ್ರಿಸ್ಟೋಫರ್ ಲಕ್ಸನ್ ಅವರ ಅಧಿಕೃತ ಭಾರತ ಪ್ರವಾಸದ ಸಂದರ್ಭದಲ್ಲಿ ಮಾಡಿಕೊಳ್ಳಲಾದ ತಿಳಿವಳಿಕಾ ಒಪ್ಪಂದಗಳು ಹಾಗೂ ಘೋಷಣೆಗಳ ಪ್ರಗತಿಯ ಬಗ್ಗೆಯೂ ಪರಿಶೀಲನೆ ನಡೆಸಲಾಯಿತು. ಉಭಯ ರಾಷ್ಟ್ರಗಳು ಭವಿಷ್ಯದಲ್ಲಿಯೂ ಉನ್ನತ ಮಟ್ಟದ

ಸಂವಹನಗಳನ್ನು ಮುಂದುವರಿಸಲು ಒಮ್ಮತ ಸೂಚಿಸಿವೆ. ಮುಂದಿನ ಸುತ್ತಿನ ಸಮಾಲೋಚನಾ ಸಭೆ ನ್ಯೂಜಿಲೆಂಡ್‌ನ ವೆಲಿಂಗ್ಟನ್‌ನಲ್ಲಿ, ಪರಸ್ಪರ ಅನುಕೂಲಕರ ದಿನಾಂಕದಂದು ನಡೆಯಲಿದೆ.

<><><><>

ಚೀನಾದಲ್ಲಿಂದು ೨೦೨೫ರ ಹಾಂಗ್ ಕಾಂಗ್ ಓಪನ್ ಬ್ಯಾಡ್ಮಿಂಟನ್ ಟೂರ್ನಿಗೆ ಚಾಲನೆ ದೊರೆಯಲಿದೆ. ಎರಡು ಬಾರಿಯ ಒಲಿಂಪಿಕ್ ಪದಕ ವಿಜೇತೆ ಪಿ.ವಿ. ಸಿಂಧು ತಮ್ಮ ಮೊದಲ ಸುತ್ತಿನ ಪಂದ್ಯದಲ್ಲಿ ಡೆನ್ಮಾರ್ಕ್‌ನ ಲೈನ್ ಕ್ರಿಸ್ಟೋಫರ್ಸನ್ ವಿರುದ್ಧ ಕಣಕ್ಕಿಳಿಯಲಿದ್ದಾರೆ. ಪುರುಷರ ಸಿಂಗಲ್ಸ್ ವಿಭಾಗದಲ್ಲಿ, ಲಕ್ಷ್ಯ ಸೇನ್, ಉತ್ತಮ ಪ್ರದರ್ಶನ ನೀಡುವ ನಿರೀಕ್ಷೆಯಲ್ಲಿದ್ದಾರೆ. ಅವರ ಜೊತೆಗೆ ಎಚ್.ಎಸ್. ಪ್ರಣಯ್ ಹಾಗೂ ಆಯುಷ್ ಶೆಟ್ಟಿ ಕೂಡ ಈ ವಿಭಾಗದಲ್ಲಿ ಸ್ಪರ್ಧಿಸುತ್ತಿದ್ದಾರೆ. ಮಾಜಿ ವಿಶ್ವ ಅಗ್ರ ಶ್ರೇಯಾಂಕಿತ ಆಟಗಾರ ಕಿಡಂಬಿ ಶ್ರೀಕಾಂತ್, ಟೂರ್ನಿಯ ಅರ್ಹತಾ ಸುತ್ತಿನಲ್ಲಿ ಭಾರತದವರೇ ಆದ ತರುಣ್ ಮಣ್ಣೆಪಳ್ಳಿ ವಿರುದ್ಧ ಸೆಣಸಾಟ ನಡೆಸಲಿದ್ದಾರೆ. ಪುರುಷರ ಡಬಲ್ಸ್ ವಿಭಾಗದಲ್ಲಿ ಭಾರತದ ಸಾತ್ವಿಕ್ ಸೈರಾಜ್ ರಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿ ಕಣಕ್ಕಿಳಿಯಲಿದ್ದಾರೆ. ಭಾರತದ ಹರಿಹರನ್ ಅಂಸಕರೂನನ್ ಮತ್ತು ರೂಬನ್ ಕುಮಾರ್ ಜೋಡಿ ಕೂಡ ಟೂರ್ನಿಯಲ್ಲಿ ಸ್ಪರ್ಧಿಸುತ್ತಿದೆ. ಮಿಶ್ರ ಡಬಲ್ಸ್ ವಿಭಾಗದಲ್ಲಿ ಧ್ರುವ್ ಕಪಿಲಾ-ತನಿಷಾ ಕ್ರಾಸ್ಟೋ ಹಾಗೂ ರೋಹನ್ ಕಪೂರ್-ರುತ್ವಿಕಾ ಗಡ್ಡೆ ಜೋಡಿಗಳು ಭಾರತದ ಪರವಾಗಿ ಕಣಕ್ಕಿಳಿಯಲಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>